ಪತ್ರಿಕಾ ತುಣುಕುಗಳು
**PAPER CLIPPINGS**

ಶಾಖೆ / ವಿಷಯ : DEPARTMENT / SUBJECT: 

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ

ದಿನಾಂಕ : DATE : 19/9/2020

**ಮುನ್ನೆಚ್ಚರಿಕೆ** ನೆಗೆಟಿವ್ ಬಂದರಷ್ಟೇ ಪ್ರವೇಶ | ಸದನ ಆರಂಭದ 72 ತಾಸಿನೊಳಗೆ ಕೊರೋನಾ ಪರೀಕ್ಷೆ | ಎಲ್ಲ ಸದಸ್ಯರಿಗೂ ಮಾಸ್ಕ್, ಸ್ಯಾನಿಟೈಸರ್ ಕಿಟ್

# ಅಧಿವೇಶನಕ್ಕೆ ಬರಲು ಕೊರೋನಾ ಟೆಸ್ಟ್ ಕಡ್ಡಾಯ

**ಕನ್ನಡಪ್ರಭ ವಾರ್ತೆ** ಬೆಂಗಳೂರು

ವಿಧಾನಮಂಡಲ ಅಧಿವೇಶನವು ಸೆ.21ರಿಂದ ಪ್ರಾರಂಭವಾಗುತ್ತಿದೆ. ಈ ಹಿನ್ನೆಲೆಯಲ್ಲಿ ವಿಧಾನ ಮಂಡಲದ ಉಭಯ ಸದನಗಳ ಪ್ರವೇಶಕ್ಕೆ ಕೊರೋನಾ ನಗೆಟಿವ್ ವರದಿ ಕಡ್ಡಾಯವಾಗಿದೆ.

'ಪರಿಷತ್ ಸಭಾಂಗಣಕ್ಕೆ ಪ್ರವೇಶಿಸುವ ಪ್ರತಿಯೊಬ್ಬರೂ ಕಡ್ಡಾಯವಾಗಿ ಕೊರೋನಾ ಪರೀಕ್ಷೆ ಮಾಡಿಸಿಕೊಳ್ಳಬೇಕು. ಜತೆಗೆ ಕೊರೋನಾ ನಿಯಂತ್ರಣ ಕ್ರಮ ಪಾಲಿಸ ಬೇಕು' ಎಂದು ವಿಧಾನಪರಿಷತ್ ಕಾರ್ಯದರ್ಶಿ ಕೆ.ಆರ್. ಮಹಾಲಕ್ಷ್ಮೀ ತಿಳಿಸಿದ್ದಾರೆ.

ಶುಕ್ರವಾರ ವಿಧಾನಸೌಧದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ರಾಜ್ಯದಲ್ಲಿ ಕೊರೋನಾ ಸೋಂಕು ವ್ಯಾಪಕವಾಗಿ ಹರಡುತ್ತಿರುವ ಹಿನ್ನೆಲೆಯಲ್ಲಿ ಆರೋಗ್ಯ ಇಲಾಖೆ ಮಾರ್ಗಸೂಚಿಯಂತೆ ವಿಧಾನಪರಿಷತ್ ಆವರಣದಲ್ಲಿ ಕೊರೋನಾ ನಿಯಂತ್ರಣಕ್ಕೆ ಎಲ್ಲಾ ರೀತಿಯ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗಿದೆ. 72 ಗಂಟೆಗಳೊಳಗಾಗಿ ಆರ್‌ಟಿ-ಪಿಸಿಆರ್ ಕೊರೋನಾ ಪರೀಕ್ಷೆ ಮಾಡಿಸಿಕೊಂಡು ನೆಗೆಟಿವ್ ವರದಿ ಹೊಂದಿದ್ದರೆ ಮಾತ್ರವೇ ಸದನದಲ್ಲಿ ಭಾಗವಹಿಸಲು ಅವಕಾಶ ನೀಡಲಾಗುವುದು ಎಂದು ಸ್ಪಷ್ಟಪಡಿಸಿದರು.



ವಿಧಾನಸಭೆಯ ಆಸನಗಳನ್ನು ಸ್ವಚ್ಛಗೊಳಿಸುತ್ತಿರುವ ಸಿಬ್ಬಂದಿ.

**58 ಸೂಚನೆ, 1,254 ಪ್ರಶ್ನೆ ಸ್ವೀಕಾರ:** ಎಂಟು ದಿನಗಳು ನಡೆಯಲಿರುವ ವಿಧಾನಪರಿಷತ್ ಕಲಾಪದಲ್ಲಿ ಮೊದಲಿಗೆ ಇತ್ತೀಚೆಗೆ ಅಗಲಿದ ಗಣ್ಯರಿಗೆ ಸಂತಾಪ ಸೂಚಿಸಲು ಸಂತಾಪ ಸೂಚಕ ನಿರ್ಣಯ ಮಂಡಿಸಲಾಗುವುದು. ಬಳಿಕ ಕಳೆದ ಅಧಿವೇಶನದಿಂದ ಈವರೆಗೆ ರಾಷ್ಟ್ರಪತಿ ಹಾಗೂ ರಾಜ್ಯಪಾಲರಿಂದ ಅಂಗೀಕೃತಗೊಂಡ ವಿಧೇಯಕಗಳ ಪಟ್ಟಿಯನ್ನು ಸಭೆ ಮುಂದೆ ಮಂಡಿಸಲಾಗುವುದು ಎಂದು ಮಹಾಲಕ್ಷ್ಮೀ ಮಾಹಿತಿ ನೀಡಿದರು.

ಅಲ್ಲದೆ, ಸದಸ್ಯರಿಂದ 1254 ಪ್ರಶ್ನೆಗಳನ್ನು ಸ್ವೀಕರಿಸಿದ್ದು ನಿಯಮ 72ರ ಅಡಿ 34 ಸೂಚನೆಗಳು ಹಾಗೂ ನಿಯಮ 330ರ ಅಡಿ 24 ಸೂಚನೆಗಳನ್ನು ಸ್ವೀಕರಿಸಲಾಗಿದೆ. ಕಳೆದ ಅಧಿವೇಶನದಲ್ಲಿ ವಿಧಾನಸಭೆಯಲ್ಲಿ ಅಂಗೀಕಾರಗೊಂಡ 9 ವಿಧೇಯಕಗಳು ವಿಧಾನಪರಿಷತ್‌ನಲ್ಲಿ ಮಂಡನೆಯಾಗುವುದು ಬಾಕಿ ಇದೆ. ಈ ಪೈಕಿ ಎರಡು ವಿಧೇಯಕಗಳಿಗೆ ಸುಗ್ರೀವಾಜ್ಞೆ ಹೊರಡಿಸಿದ್ದು ಉಳಿದ 7 ವಿಧೇಯಕ ಮಂಡನೆಯಾಗಲಿದೆ. ಸದಸ್ಯರ ಖಾಸಗಿ ಕಲಾಪಕ್ಕೂ ಅವಕಾಶವಿದೆ ಎಂದರು.

## ಕೊರೋನಾ ಟೆಸ್ಟ್ ಮಾಡಿಸಿಕೊಂಡ ಕಾಗೇರಿ



ಬೆಂಗಳೂರು: ವಿಧಾನಮಂಡಲ ಅಧಿವೇಶನ ಹಿನ್ನೆಲೆಯಲ್ಲಿ 72 ಗಂಟೆ ಮುಂಚಿತವಾಗಿ ಕೋವಿಡ್ ಪರೀಕ್ಷೆ ಮಾಡಿಸಿಕೊಳ್ಳುವುದು ಕಡ್ಡಾಯವಾಗಿದ್ದು, ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಆರ್‌ಟಿಪಿಸಿಆರ್ ಪರೀಕ್ಷೆ ಮಾಡಿಸಿಕೊಂಡರು. ಅಧಿವೇಶನದಲ್ಲಿ ಭಾಗ ವಹಿಸುವ ಎಲ್ಲರಿಗೂ ಕೋವಿಡ್ ಪರೀಕ್ಷೆ ಮಾಡಿಸಿಕೊಳ್ಳಲು ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ವ್ಯವಸ್ಥೆ ಮಾಡಲಾಗಿದೆ.